ಪಿ.ಸಿ. ನಂ. 166/2024

(ಪಿ.ಡಬ್ಲೂ-1)

**ಸಾಕ್ಷಿಗೆ ದಿನಾಂಕ 01-06-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಶ್ರೀ. ಎಮ್ ಎ ಎಮ್ ವಕೀಲರಿಂದ</u>**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ತಿಳಿಸಿದ ಎಲ್ಲ ಸಂಗತಿಗಳು ಸತ್ಯವಾಗಿರುತ್ತವೆ. ಮುಂದುವರೆದ ನನ್ನ ಮುಖ್ಯ ವಿಚಾರಣೆ ಲಗತ್ತಾಗಿ ಕೆಳಕಂಡ ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ.

1. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಎಮ್ ಕೆ ಹುಬ್ಬಳ್ಳಿ ಶಾಖೆಗೆ ಸೇರಿದ ಆರೋಪಿ ನೀಡಿದ ಚೆಕ್ನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು, ಚೆಕ ನಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ.1 (ಎ) ಎಂದು,
2. ಕೆನರಾ ಬ್ಯಾಂಕ್, ಖಾನಾಪೂರ ಶಾಖೆರವರು ನೀಡಿರುವ ಹಿಂಬರಹವನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.2 ಎಂದು,
3. ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.3 ಎಂದು,
4. ಅಂಚೆ ರಶೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.4 ಎಂದು,
5. ಅಂಚೆ ಸ್ವೀಕೃತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.5 ಎಂದು ಗುರುತಿಸಲಾಯಿತು.

ಆದುದರಿಂದ ನನ್ನ ಪಿರ್ಯಾದನ್ನು ಪಿರ್ಯಾದೆಯಲ್ಲಿ ಕೋರಿಕೊಂಡಂತೆ ಆರೋಪಿಯನ್ನು ಶಿಕ್ಷೆಗೆ ಒಳಪಡಿಸಿ ಚೆಕ್ ಮೊತ್ತವನ್ನು ನೀಡುವಂತೆ ಆದೇಶಿಸಬೇಕಾಗಿ ಕೋರಿಕೊಳ್ಳುತ್ತೇನೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ. ಹೇ. ಕೆ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,
ಖಾನಾಪೂರ.